# ಅನುದಾನ ಅನ್ಯ ಉದ್ದೇಶಕ್ಕೆ ಬಳಕೆ ಆರೋಪ

**ವಿಧಾನ ಪರಿಷತ್** : ರಾಜ್ಯದ ವಿಶ್ವವಿದ್ಯಾಲ ಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಶ್ರೇಯಾಭಿವೃದ್ಧಿ ಸರ್ಕಾರ ನೀಡುತ್ತಿರುವ ಅನುದಾನವನ್ನು ಅನ್ಯ ಉದ್ದೇಶಕ್ಕೆ ಬಳಸುತ್ತಿರುವು ದನ್ನು ಗಂಭೀರವಾಗಿ ಪರಿಗಣಿಸಿದ್ದು ಶೀಘ್ರವೇ ಕುಲಪತಿಗಳ ವಿಶೇಷ ಸಭೆ ಕರೆಯುವುದಾಗಿ ಡಿಸಿಎಂ ಗೋವಿಂದ ಕಾರಜೋಳ ಹೇಳಿದರು. ವಿಶ್ವವಿದ್ಯಾಲಯದ ಕುಲಪತಿಯೊಬ್ಬರು 7 ಕೋಟಿ ರೂ.ಗಳನ್ನು ತಮ್ಮ ಖಾತೆಗೆ ವರ್ಗಾಯಿಸಿಕೊಂಡಿರುವ ಸಂಬಂಧ ಜೆಡಿಎಸ್ ಸದಸ್ಯ ರಮೇಶ್ ಗೌಡ ಪ್ರಶ್ನೆಗೆ ಪಶುಸಂಗೋಪನೆ ಸಚಿವ ಪ್ರಭುಚವ್ಹಾಣ್ ಪ್ರತಿಕ್ರಿಯಿಸಿ, ಈ ಸಂಬಂಧ ಮಾಹಿತಿ ಪಡೆದು ಉತ್ತರಿಸಲಾಗುತ್ತದೆ ಎಂದರು. ಆಗ ಡಿಸಿಎಂ ಗೋವಿಂದ ಕಾರಜೋಳ ಮಾತನಾಡಿ, ಇದು ಕೇವಲ ಒಂದು ವಿವಿ ಸಮಸ್ಯೆಯಲ್ಲ, ಎಲ್ಲ ವಿವಿಗಳಲ್ಲೂ ಹೀಗೆ ಆಗುತ್ತಿದೆ. ಈ ವಿಚಾರವನ್ನು ಸರ್ಕಾರ ಅತ್ಯಂತ ಗಂಭೀರವಾಗಿ ತೆಗೆದುಕೊಂಡಿದೆ ಎಂದರು. ರಾಜ್ಯದ ವಿವಿಧ ವಿವಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ.ಜಾತಿ, ಪ.ಪಂಗಡದ ವಿದ್ಯಾರ್ಥಿಗಳಿಗೆ ವಸತಿ ನಿಲಯ, ಪಠ್ಯಪುಸ್ತಕ ಸೇರಿದಂತೆ ಮೂಲಸೌಕರ್ಯ ಒದಗಿಸಲು ಎಸ್‌ಸಿಪಿ, ಟಿಎಸ್‌ಪಿ ಯೋಜನೆಯಿಂದ ಸರ್ಕಾರ ಅನುದಾಸ ಬಿಡುಗಡೆ ಮಾಡುತ್ತಿದೆ. ಆದರೆ, 9 ವಿಶ್ವವಿದ್ಯಾಲಯಗಳು ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಬಂದಿರುವ ಅನುದಾನವನ್ನು ಅನ್ಯ ಉದ್ದೇಶಕ್ಕೆ ಬಳಸಿಕೊಂಡಿವೆ. ಪ.ಜಾತಿ, ಪ.ಪಂಗಡದ ವಿದ್ಯಾರ್ಥಿಗಳ ಸೌಲಭ್ಯಕ್ಕಾಗಿ ನೀಡಿರುವ ಅನುದಾನವನ್ನು ಕುಲಪತಿಗಳ ಖಾತೆಗೆ ಹಾಕಿಕೊಳ್ಳಲು ಬರುವುದಿಲ್ಲ, ಈ ಬಗ್ಗೆ ಶೀಘ್ರವೇ ವಿಶೇಷ ಸಭೆ ಕರೆಯಲಾಗುತ್ತದೆ ಎಂದರು. ಪ್ರತಿಪಕ್ಷದ ಸಭಾನಾಯಕ ಎಸ್.ಆರ್.ಪಾಟೀಲ್ ಮಾತನಾಡಿ, ಹಣ ಅನ್ಯ ಉದ್ದೇಶಕ್ಕೆ ಬಳಸಿಕೊಂಡವರ ವಿರುದ್ಧ ಕಾನೂನಾತ್ಮಕವಾಗಿ ಕ್ರಮ ತೆಗೆದುಕೊಳ್ಳಲು ಅವಕಾಶವಿದೆ. ಸರ್ಕಾರ ಶೀಘ್ರ ಕ್ರಮ ವಹಿಸಬೇಕು ಎಂದು ಆಗ್ರಹಿಸಿದರು.

## ಕೆಟಿಪಿಪಿ ಕಾಯ್ದೆ ವಿನಾಯ್ತಿ

**ವಿಧಾನಸಭೆ:** ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ (ಕೆಆರ್ ಐಡಿಎಲ್) ವತಿಯಿಂದ 2 ಕೋಟಿ ರೂ. ವರೆಗಿನ ನಿರ್ಮಾಣ ಕಾಮಗಾರಿ ಕೈಗೊಳ್ಳಲು 'ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಕಾಯ್ದೆ' (ಕೆಟಿಪಿಪಿ) ಯಿಂದ 4ಜಿ ವಿನಾಯ್ತಿ ನೀಡುವ ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು. ಬುಧವಾರದ ಕಲಾಪದಲ್ಲಿ ಪ್ರತಿಪಕ್ಷ ಕಾಂಗ್ರೆಸ್ ಸದಸ್ಯರ ಧರಣಿ ನಡುವೆಯೇ ಮುಖ್ಯಮಂತ್ರಿ ಯಡಿಯೂರಪ್ಪ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ತಿದ್ದುಪಡಿ ವಿಧೇಯಕ ಮಂಡಿಸಿ ಅನುಮೋದನೆ ಪಡೆದರು.